# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಆಡಳಿತ)ರವರ ಕಛೇರಿ, ಕಲಬುರಗಿ

ಸಂಖ್ಯೆ: ಸಿ2(1)/ಆಡಳಿತ/ಸಂಗೀತ–2/ಜೇ.ಪಟ್ಟಿ/43/2021–22 ದಿನಾಂಕ: 07–06–2021

## ಅಧಿಸೂಚನೆ

**ವಿಷಯ :–** ಕಲಬುರಗಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಗೀತ ಶಿಕ್ಷಕರಿಗೆ ಪ್ರೌಢ ಶಾಲಾ ಸಂಗೀತ ಶಿಕ್ಷಕರು ಗ್ರೇಡ್–2 ಹುದ್ದೆಗೆ ಬಡ್ತಿ ನೀಡಲು ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

* * * * *

ಪ್ರೌಢ ಶಾಲಾ ಸಂಗೀತ ಶಿಕ್ಷಕರು ಗ್ರೇಡ್–2 ಹುದ್ದೆಗೆ ಪ್ರಚಲಿತ ವೃಂದ ಹಾಗೂ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಲಾದ ವಿದ್ಯಾರ್ಹತೆ ಹೊಂದಿದ ಕಲಬುರಗಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಗೀತ ಶಿಕ್ಷಕರ ಮೂಲ ವೃಂದ, ಕಲ್ಯಾಣ ಕರ್ನಾಟಕ ಪ್ರದೇಶ ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಈ ಕಛೇರಿಯ ವೆಬ್ ಸೈಟ (www.ddpikalaburagi.in) ದಲ್ಲಿ ಪ್ರಕಟಿಸಲಾಗಿದೆ.

ಸಂಬಂಧಿಸಿದ ಶಿಕ್ಷಕರು ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಗಮನಿಸಿ ಪಟ್ಟಿಯಲ್ಲಿ ನಮೂದಿಸಿರುವ ವಿವರಗಳ ಕುರಿತು ಹಾಗೂ ಯಾವುದಾದರು ಶಿಕ್ಷಕರ ಹೆಸರು ಬಿಟ್ಟು ಹೋದಲ್ಲಿ ಸೇರಿಸಲು ಆಕ್ಷೇಪಣೆಯನ್ನು ಪೂರಕ ದಾಖಲೆಗಳೊಂದಿಗೆ ದಿನಾಂಕ: 19–06–2021 ರವರೆಗೆ ಈ ಕಛೇರಿಗೆ ಸಲ್ಲಿಸಬಹುದು. ನಿಗದಿಪಡಿಸಲಾದ ಅವಧಿಯ ನಂತರ ಸಲ್ಲಿಸಲಾದ ಆಕ್ಷೇಪನೆಗಳನ್ನು ಪರಿಗಣಿಸಲಾಗುವದಿಲ್ಲ.

ಉಪನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ

ಪ್ರತಿಯನ್ನು :–

1. ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2. ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ಕಳುಹಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ ಸಂಬಂಧಿಸಿದ ಶಿಕ್ಷಕರ ಗಮನಕ್ಕೆ ತರಲು ತಿಳಿಸಿದೆ.
3. ಕಛೇರಿಯ ಸೂಚನಾ ಫಲಕಕ್ಕೆ.